ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

# ಸ್ವಚ್ಛತಾವಾಣಿ
ವಾರ್ತಾಪತ್ರ



01

## ಮಾನ್ಯ ಮುಖ್ಯಮಂತ್ರಿಯವರಿಂದ ಜೆಜೆಎಂ ಹಾಗೂ ಎಸ್.ಬಿ.ಎಂ(ಜಿ) ಯೋಜನೆಗಳ ವಸ್ತು ಪ್ರದರ್ಶನ ಮಳಿಗೆ ವೀಕ್ಷಣೆ

ತುಮಕೂರಿನಲ್ಲಿ ನಡೆದ ಜಿಲ್ಲಾ ವ್ಯಾಪ್ತಿಯ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ ಹಾಗೂ ವಿವಿಧ ಯೋಜನೆಗಳ ಫಲಾನುಭವಿಗಳಿಗೆ ಸವಲತ್ತು ವಿತರಣಾ ಕಾರ್ಯಕ್ರಮಕ್ಕೆ ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯನವರು ಚಾಲನೆ ನೀಡಿದರು. ಆ ನಂತರ ಕಾರ್ಯಕ್ರಮದಲ್ಲಿ ಹಾಕಲಾಗಿದ್ದ ಜೆಜೆಎಂ ಹಾಗೂ ಎಸ್.ಬಿ.ಎಂ(ಜಿ) ಯೋಜನೆಗಳ ವಸ್ತು ಪ್ರದರ್ಶನ ಮಳಿಗೆಗಳನ್ನು ವೀಕ್ಷಿಸಿದರು. ಈ ಕಾರ್ಯಕ್ರಮದಲ್ಲಿ ಸಚಿವರು, ಶಾಸಕರು, ಆರ್.ಡಿ.ಡಬ್ಲ್ಯೂ.ಎಸ್.ಡಿ ಮುಖ್ಯ ಅಭಿಯಂತರರಾದ ಶ್ರೀ ಎಜಾಜ್ ಹುಸೇನ್ ಉಪಸ್ಥಿತರಿದ್ದರು.

---



02

## ಸಚಿವರಿಂದ ಇಲಾಖೆಯ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ

ಗ್ರಾ & ಪಂ ರಾಜ್ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ ರವರು ಇಲಾಖೆಯ ನೂತನ ವರ್ಷದ ಕ್ಯಾಲೆಂಡರನ್ನು ಬಿಡುಗಡೆಗೊಳಿಸಿದರು. ಈ ಸಂದರ್ಭದಲ್ಲಿ ಅಪರ ಮುಖ್ಯ ಕಾರ್ಯದರ್ಶಿ ಪಂ.ರಾಜ್, ಪ್ರಧಾನ ಕಾರ್ಯದರ್ಶಿ ಪಂ.ರಾಜ್, ಆಯುಕ್ತರು ಪಂ.ರಾಜ್, ನಿರ್ದೇಶಕರು ಗ್ರಾ.ಕು.ನೀ & ನೈ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

---



03

## ಗ್ರಾ & ಪಂ.ರಾಜ್ ಸಚಿವರಿಂದ ಬಜೆಟ್ ಪೂರ್ವಭಾವಿ ಸಭೆ

ಬೆಂಗಳೂರಿನ ವಿಕಾಸಸೌಧದಲ್ಲಿ ಗ್ರಾ & ಪಂ ರಾಜ್ ಹಾಗೂ ಐಟಿಬಿಟಿ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ ರವರ ಅಧ್ಯಕ್ಷತೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳೊಂದಿಗೆ ಬಜೆಟ್ ಪೂರ್ವಭಾವಿ ಸಭೆ ನಡೆಯಿತು. ಸಭೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯವರಾದ ಶ್ರೀಮತಿ ಉಮಾ ಮಹಾದೇವನ್, ಪ್ರಧಾನ ಕಾರ್ಯದರ್ಶಿ ಶ್ರೀ ಅಂಜುಮ್ ಪರ್ವೇಜ್ ಅವರು ಉಪಸ್ಥಿತರಿದ್ದರು.

---



04

## 6 ಬಹುಗ್ರಾಮ ಕುಡಿಯುವ ನೀರು ಯೋಜನೆಗಳಿಗೆ ಸಂಪುಟ ಅನುಮೋದನೆ

ಗ್ರಾ & ಪಂ ರಾಜ್ ಹಾಗೂ ಐಟಿಬಿಟಿ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ ರವರು ಸಂಪುಟ ಅನುಮೋದನೆಗೆ ಹೋಗಲಿದ್ದ 6 ಗ್ರಾ.ಕು.ನೀ. ಸರಬರಾಜು ಯೋಜನೆಗಳ ಕುರಿತು ಇಲಾಖೆಯ ಹಿರಿಯ ಅಧಿಕಾರಿಗಳಿಂದ ಮಾಹಿತಿ ಪಡೆದು ಪರಿಶೀಲನೆ ನಡೆಸಿದರು. ಸಂಪುಟ ಸಭೆಯಲ್ಲಿ ಈ 6 ಬಹುಗ್ರಾಮ ಯೋಜನೆಗಳು ಅನುಮೋದನೆಗೊಂಡಿದ್ದು ರೂ. 392 ಕೋಟಿಗೂ ಅಧಿಕ ಹಣವನ್ನು ಸಂಪುಟ ಮಂಜೂರು ಮಾಡಿದೆ. ಸಭೆಯಲ್ಲಿ RDWSD ಪ್ರಧಾನ ಕಾರ್ಯದರ್ಶಿ ಶ್ರೀ ಅಂಜುಮ್ ಪರ್ವೇಜ್, RDWSD ನಿರ್ದೇಶಕರಾದ ಶ್ರೀ ನಾಗೇಂದ್ರ ಪ್ರಸಾದ್ ಹಾಗೂ ಗ್ರಾ.ಕು.ನೀ & ನೈ ಇಲಾಖೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು

---



05

## DDWS ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ವಾರ್ಷಿಕ ಅನುಷ್ಠಾನ ಯೋಜನೆ 2024-25 ಸಭೆ ದೆಹಲಿ

ಕುಡಿಯುವ ನೀರು ಮತ್ತು ನೈಮಲ್ಯ ಇಲಾಖೆ, ಕೇಂದ್ರ ಸರಕಾರ, ಕಾರ್ಯದರ್ಶಿ ವಿನಿ ಮಹಾಜನ್ ಅವರ ಅಧ್ಯಕ್ಷತೆಯಲ್ಲಿ ಕರ್ನಾಟಕ 2024–25 ರ AIP ಅನ್ನು ಪ್ರಸ್ತುತಪಡಿಸಿ SBMG ಹಂತ II ರ ಅಡಿಯಲ್ಲಿ ಭೌತಿಕ ಮತ್ತು ಆರ್ಥಿಕ ಗುರಿಗಳನ್ನು ಅಧಿಕಾರಿಗಳು ಚರ್ಚಿ ಸಿದರು ಸಭೆಯಲ್ಲಿ RDWSD ನಿರ್ದೇಶಕರಾದ ಶ್ರೀ ನಾಗೇಂದ್ರ ಪ್ರಸಾದ್, ಶ್ರೀಮತಿ. ಪಾರ್ವತಿ, CAO, RDWSD, ಶ್ರೀಮತಿ. ಶೀತಲ್ ಸಿಂಗ್, ನಿರ್ದೇಶಕರು ISA RDWSD, ಜೊತೆಗೆ ರಾಜ್ಯ ಸಮಾಲೋಚಕರು ಉಪಸ್ಥಿತರಿದ್ದರು.

---




06

## ಗ್ರಾ.ಕು.ನೀ & ನೈ ಇಲಾಖೆಯ ನಿರ್ದೇಶಕರಿಂದ ರಾಮನಗರ ಜಿಲ್ಲೆಗೆ ಭೇಟಿ

ಶ್ರೀ ನಾಗೇಂದ್ರ ಪ್ರಸಾದ್ ಕೆ. IAS, ನಿರ್ದೇಶಕರು, ಗ್ರಾ.ಕು.ನೀ & ನೈ ಇಲಾಖೆ ಇವರು ರಾಮನಗರ ಜಿಲ್ಲೆಗೆ ಭೇಟಿ ನೀಡಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಸಮ್ಮುಖದಲ್ಲಿ ಜೆಜೆಎಂ ಹಾಗೂ ಎಸ್.ಬಿ.ಎಂ (ಜಿ) ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿದರು ಈ ವೇಳೆ ಎಸ್.ಸಿ ಮಹೇಶ್, ಉಪಕಾರ್ಯದರ್ಶಿ (ಅಭಿವೃದ್ಧಿ) RDWSD, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ, ಕಾರ್ಯಪಾಲಕ ಅಭಿಯಂತರರು ಜಿಲ್ಲಾ ಸಮಾಲೋಚಕರು ಉಪಸ್ಥಿತರಿದ್ದರು.